## <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದ ಶಾಖಾಧಿಕಾರಿಗಳು ಹಾಗೂ ಸಮಾನಾಂತರ ಹುದ್ದೆಯ ಅಧಿಕಾರಿಗಳಿಗೆ ಮೊಬೈಲ್ ದೂರವಾಣಿ ವೆಚ್ಚವನ್ನು ಮರುಪಾವತಿಸುವ ಬಗ್ಗೆ.

ಓದಲಾಗಿದೆ: ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿಗಳ ಸಂಘ, ಬೆಂಗಳೂರು ಇವರ ಮನವಿ ದಿನಾಂಕ:28.07.2011

*******

<u>ಪ್ರಸ್ತಾವನೆ:-</u>

ಕರ್ನಾಟಕ ಸರ್ಕಾರದ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳಿಗೆ ಸ್ಥಿರ ದೂರವಾಣಿ ಹಾಗೂ ಮೊಬೈಲ್ ದೂರವಾಣಿ ವೆಚ್ಚವನ್ನು ಸರ್ಕಾರವು ಮರುಪಾವತಿಸುತ್ತಿದ್ದು, ಸಚಿವಾಲಯದ ಶಾಖಾಧಿಕಾರಿಗಳು ಇಲಾಖೆಯ ಪ್ರಮುಖ ಅಧಿಕಾರಿಗಳಾಗಿದ್ದು, ಮೇಲಧಿಕಾರಿಗಳು ತುರ್ತು ಸಂದರ್ಭದಲ್ಲಿ ಶಾಖಾಧಿಕಾರಿಗಳನ್ನು ಸಂಪರ್ಕಿಸುವ ಸನ್ನಿವೇಶಗಳು ಬಹಳಷ್ಟು ಇದ್ದು, ಶಾಖಾಧಿಕಾರಿಗಳಿಗೆ ಮೊಬೈಲ್ ಅಥವಾ ಸ್ಥಿರ ದೂರವಾಣಿ ಇಲ್ಲದೇ ಸಂಪರ್ಕಿಸಲು ಸಾಧ್ಯವಾಗುತ್ತಿಲ್ಲ. ಆದಕಾರಣ ಕೆಲಸದ ಸುಗಮ ನಿರ್ವಹಣೆಯ ದೃಷ್ಟಿಯಿಂದ ಸಚಿವಾಲಯದ ಶಾಖಾಧಿಕಾರಿಗಳಿಗೂ ಸಹ ದೂರವಾಣಿಯನ್ನು ಒದಗಿಸಬೇಕೆಂದು ಮೇಲೆ ಓದಲಾದ ಮನವಿಯಲ್ಲಿ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಅಧಿಕಾರಿಗಳ ಸಂಘ, ಬೆಂಗಳೂರು ಅವರು ಕೋರಿರುತ್ತಾರೆ.

ಕರ್ನಾಟಕ ಸರ್ಕಾರದ ಸಚಿವಾಲಯದ ಶಾಖಾಧಿಕಾರಿಗಳು ಹಾಗೂ ಸಮಾನಾಂತರ ಹುದ್ದೆಯ ಅಧಿಕಾರಿಗಳ ಮೊಬೈಲ್ ದೂರವಾಣಿ ವೆಚ್ಚವನ್ನು ಮರುಪಾವತಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ :-

## <u>ಆದೇಶ ಸಂಖ್ಯೆ: ಸಿಆಸುಇ 374 ಡಿಟಿಎನ್ 2011,ಬೆಂಗಳೂರು, ದಿನಾಂಕ: 3ನೇ ಸೆಪ್ಟೆಂಬರ್ 2013.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಖಾಧಿಕಾರಿ ಹಾಗೂ ಈ ಹುದ್ದೆಗೆ ಸಮಾನಾಂತರವಾದ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ಮಾಸಿಕ ₹ 300/- (ರೂಪಾಯಿ ಮೂರು ನೂರು ಮಾತ್ರ)ಗಳ ಗರಿಷ್ಟ ಮಿತಿಗೆ ಒಳಪಟ್ಟು ಅವರ ಸ್ವಂತ ಮೊಬೈಲ್ ದೂರವಾಣಿ ವೆಚ್ಚವನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಮರುಪಾವತಿಸಲು ಸರ್ಕಾರ ಮಂಜೂರಾತಿ ನೀಡಿದೆ.

ಸಚಿವಾಲಯದ ಶಾಖಾಧಿಕಾರಿ ಹಾಗೂ ಈ ಹುದ್ದೆಗೆ ಸಮಾನಾಂತರ ಹುದ್ದೆಯ ವೃಂದದ ಅಧಿಕಾರಿಗಳು ನಾಲ್ಕು ತಿಂಗಳಿಗೊಮ್ಮೆ ಮೊಬೈಲ್ ದೂರವಾಣಿ ವೆಚ್ಚಕ್ಕೆ ಸಂಬಂಧಿಸಿದ ಬಿಲ್ಲುಗಳನ್ನು ಅವಶ್ಯಕ ಪ್ರಮಾಣ ಪತ್ರದೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) ಶಾಖೆಗೆ ಸಲ್ಲಿಸಿ ಹಣ ಮರುಪಾವತಿ ಮಾಡಿಕೊಳ್ಳಬಹುದಾಗಿದೆ.

ಮೇಲ್ಕಂಡ ವೆಚ್ಚವನ್ನು ಆಯವ್ಯಯದ ಲೆಕ್ಕಶೀರ್ಷಿಕೆ "2052-00-090-0-01-052-(ಯೋಜನೇತರ) ದೂರವಾಣಿ ವೆಚ್ಚಗಳು" ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 454 ವೆಚ್ಚ–12/13 ದಿನಾಂಕ:14–08–2013ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಲ್. ಗಂಗಾಧರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)
3/9/13

<u>ಗೆ</u>,

1. ಮಹಾಲೇಖಪಾಲರು ಕರ್ನಾಟಕ, (ಎ ಅಂಡ್ ಇ) ಬೆಂಗಳೂರು
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ವಿಧಾನಸೌಧ, ವಿಕಾಸಸೌಧ, ಬಹುಮಹಡಿ ಕಟ್ಟಡ. ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
4. ಖಜಾನಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು–2
5. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ–12) ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ (ಲೆಕ್ಕಪತ್ರ–1/2/3) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ/ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಎಲ್ಲಾ ಶಾಖಾಧಿಕಾರಿಗಳು/ಪತ್ರಾಂಕಿತ ಆಪ್ತ ಸಹಾಯಕರು/ ಪ್ರಾರೂಪಣಾ ಶಾಖಾಧಿಕಾರಿ/ ಹಿರಿಯ ಭಾಷಾಂತರಕಾರರು/ ಸಂಶೋಧನಾಧಿಕಾರಿ, ವಿಧಾನಸೌಧ/ ವಿಕಾಸಸೌಧ/ ಬಹುಮಹಡಿ ಕಟ್ಟಡ. ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯದ ಅಧಿಕಾರಿಗಳ ಸಂಘ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ
10. ಕಚೇರಿ ಪ್ರತಿ
11. ಹೆಚ್ಚುವರಿ ಪ್ರತಿಗಳು